ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 31–12–2020**

# ಪತ್ರಿಕಾ ಪ್ರಕಟಣೆ

## ಮುಖ್ಯ ಕಾರ್ಯದರ್ಶಿಯವರಿಗೆ ಬೀಳ್ಕೋಡುಗೆ

ಬೆಂಗಳೂರು, ಡಿಸೆಂಬರ್ 31, (ಕರ್ನಾಟಕ ವಾರ್ತೆ): ಇಂದು ನಿವೃತ್ತಿ ಹೊಂದುತ್ತಿರುವ ರಾಜ್ಯ ಸರ್ಕಾರದ ಮುಖ್ಯಕಾರ್ಯದರ್ಶಿ ವಿಜಯಭಾಸ್ಕರ್ ಅವರಿಗೆ ಬೀಳ್ಕೊಡುಗೆ ನೀಡಲಾಯಿತು.

ಇಂದು ನಗರದ ಕುಮಾರ ಕೃಪ ಅತಿಥಿ ಗೃಹದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಐಎಎಸ್ ಅಧಿಕಾರಿಗಳು ಸೇರಿದಂತೆ ಕಾರ್ಯಾಲಯದ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ನೂತನ ಮುಖ್ಯಕಾರ್ಯದರ್ಶಿಯಾಗಿ ಆಯ್ಕೆಯಾಗಿರುವ ರವಿಕುಮಾರ್ ಅವರು ವಿಜಯಭಾಸ್ಕರ್ ಅವರನ್ನು ಸನ್ಮಾನಿಸಿ ಬೀಳ್ಕೊಟ್ಟರು.

## ರಾಜ್ಯದಾದ್ಯಂತ ಗ್ರಾಮ ಪಂಚಾಯತ್ ನೂತನ ಸದಸ್ಯರಿಗೆ ತರಬೇತಿ ಕಾರ್ಯಕ್ರಮಕ್ಕೆ ಸಿದ್ಧತೆ
**- ಸಚಿವ ಕೆ.ಎಸ್.ಈಶ್ವರಪ್ಪ**

**ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):**

ಗ್ರಾಮ ಪಂಚಾಯತ್ ಚುನಾವಣೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ ರಾಜ್ಯದ ಎಲ್ಲಾ 92131 ಸದಸ್ಯರಿಗೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ವತಿಯಿಂದ ತರಬೇತಿಯನ್ನು ನೀಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಅವರು ತಿಳಿಸಿದರು.

ಗುರುವಾರ ಸುದ್ದಿಗೊಷ್ಠಿಯಲ್ಲಿ ಮಾತನಾಡಿದ ಅವರು, ಜನವರಿ 19ರಿಂದ ಮಾರ್ಚ್ 26ರ ವರೆಗೆ ತಾಲೂಕು ಹಂತದಲ್ಲಿ ಹತ್ತು ತಂಡಗಳಲ್ಲಿ ತರಬೇತಿ ನೀಡಲಾಗುವುದು. ರಾಜ್ಯದ 176ತಾಲೂಕುಗಳ 285 ಕೇಂದ್ರಗಳಲ್ಲಿ ತರಬೇತಿ ನಡೆಯಲಿದೆ. ಕೆಲವು ತಾಲೂಕುಗಳಲ್ಲಿ 2ಕೇಂದ್ರಗಳನ್ನು ತರಬೇತಿಗೆ ಗುರುತಿಸಲಾಗಿದೆ. ತರಬೇತಿಗೆ 900ಸಂಪನ್ಮೂಲ ವ್ಯಕ್ತಿಗಳನ್ನು ಈಗಾಗಲೇ ನಿಯೋಜಿಸಲಾಗಿದ್ದು, ಪ್ರತಿ ತಂಡಕ್ಕೆ 5ದಿನಗಳ ಮುಖಾಮುಖಿ ತರಬೇತಿ ನೀಡಲಾಗುವುದು. ಪ್ರತಿ ತಂಡದಲ್ಲಿ 40ಸದಸ್ಯರಿಗೆ ತರಬೇತಿ ನೀಡಲಾಗುವುದು ಎಂದರು.

ಪ್ರತಿ ದಿನದ ತರಬೇತಿ ಕಾರ್ಯಕ್ರಮ ಬೆಳಿಗ್ಗೆ 10.30ರಿಂದ ಸಂಜೆ 4ರವರೆಗೆ ನಡೆಯಲಿದೆ. ತರಬೇತಿ ಅವಧಿಯಲ್ಲಿ 15ವಿವಿಧ ವಿಷಯಾಧಾರಿತ ಅಧಿವೇಶನಗಳು ಮತ್ತು ಕೌಶಲ್ಯಾಧಾರಿತ ಮಾಹಿತಿಗಳನ್ನು ನೀಡಲಾಗುವುದು. ಪ್ರತಿ ಅಧಿವೇಶನದಲ್ಲಿ ವಿಡಿಯೊ ಮೂಲಕ ವಿಷಯ ತಜ್ಞರಿಂದ ಮಾಹಿತಿ, ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಮತ್ತು ಗುಂಪು ಚರ್ಚೆ ಇತ್ಯಾದಿ ಚಟುವಟಿಕೆಗಳನ್ನು ನಡೆಸಲಾಗುವುದು. ಪ್ರತಿ ದಿನ ರಾಜ್ಯಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಸಂವಾದ ಮತ್ತು ಪ್ರಶ್ನೋತ್ತರಕ್ಕೆ ಅವಕಾಶ ನೀಡಲಾಗುವುದು ಎಂದರು.

ತರಬೇತಿಯಲ್ಲಿ ಭಾಗವಹಿಸುವವರು ಬೆಳಿಗ್ಗೆ ಬಂದು ಸಂಜೆ ವಾಪಾಸಾಗುವರು. ಸದಸ್ಯರಿಗೆ ಪ್ರಯಾಣ ಭತ್ಯೆ ಮತ್ತು ಗ್ರಾಮ ಪಂಚಾಯತ್ ವತಿಯಿಂದ ಪ್ರತಿದಿನದ ಭಾಗವಹಿಸುವಿಕೆ ಭತ್ಯೆಯನ್ನು ನೀಡಲಾಗುವುದು ಎಂದು ಹೇಳಿದರು.

ನೂತನ ಸದಸ್ಯರಿಗೆ, ಗ್ರಾಮ ಪಂಚಾಯತಿಯ ರಚನೆ ಮತ್ತು ಸ್ವರೂಪ, ಯೋಜನೆಗಳು, ಸದಸ್ಯರ ಕರ್ತವ್ಯ ಮತ್ತು ಹೊಣೆಗಾರಿಕೆಗಳು, ವಾರ್ಡ್ ಮತ್ತು ಗ್ರಾಮಸಭೆ ಇನ್ನಿತರ ಸಭೆಗಳ ನಿರ್ವಹಣೆ, ಹಣಕಾಸು ಸಂಪನ್ಮೂಲ ಲಭ್ಯತೆ, ದೂರದೃಷ್ಟಿ ಮತ್ತು ಅಭಿವೃದ್ಧಿ ಯೋಜನೆಗಳನ್ನು ರೂಪಿಸುವ ಕುರಿತು ಮಾಹಿತಿ ಒದಗಿಸುವ ನಿಟ್ಟಿನಲ್ಲಿ ತರಬೇತಿ ಆಯೋಜಿಸಲಾಗುತ್ತಿದೆ. ತರಬೇತಿಗೆ ಅಂದಾಜು 27.16 ಕೋಟಿ ರೂ. ವೆಚ್ಚವಾಗಲಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರ 60:40 ಅನುಪಾತದಲ್ಲಿ ಭರಿಸಲಿದೆ.

ಒಂದು ತಿಂಗಳ ಒಳಗಾಗಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಆಯ್ಕೆ ಬಳಿಕ ಅವರಿಗೆ ಕ್ರಿಯಾ ಯೋಜನೆ ಸಿದ್ಧಪಡಿಸುವಿಕೆ ಇತ್ಯಾದಿಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಗ್ರಾಮ ಪಂಚಾಯತ್ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ತರಬೇತಿ ಪ್ರಕ್ರಿಯೆಯನ್ನು ನಿರಂತರವಾಗಿ ನಡೆಸಲಾಗುವುದು ಎಂದು ಹೇಳಿದರು.

## District Youth Parliaments

**Results announced**

**Bangalore, Dec 31 (Karnataka Information):** The results of District Youth Parliaments organised at four focal points of Karnataka, as a part of National Youth Festival is announced today at Bangalor.

The events was jointly organised by Nehru Yuva Kendra and National Service Scheme. The winners at district Level event will be attending the State Level event on 5th January 2021 at KLE College of pharmacy Rajaji Nagar Bangalore State level winners will be attending National Youth parliament on 12th January 2021 at Central Hall of the parliament at New Delhi, to mark the National Youth day which falls on the same day.

## ಬಿ.ಫಾರ್ಮ ಹಾಗೂ ಪ್ರಥಮ ವರ್ಷದ ಡಿ.ಫಾರ್ಮ ಕೋರ್ಸ್ ಪ್ರವೇಶ

ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):

2020-21ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಬಿ.ಫಾರ್ಮ ಹಾಗೂ ಪ್ರಥಮ ವರ್ಷದ ಡಿ.ಫಾರ್ಮ ಕೋರ್ಸ್‌ಗಳಲ್ಲಿ ಉಳಿದ ಬಾಕಿ ಸೀಟುಗಳಿಗೆ ಪ್ರವೇಶ ಪಡೆಯಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು 4ನೇ ಜನವರಿ 2021ರಂದು ಬೆಳಿಗ್ಗೆ 9.00 ರಿಂದ 11.00 ಗಂಟೆಯೊಳಗೆ ನೋಂದಣಿ ಸಮಿತಿಯ ಮುಂದೆ ಪ್ರವೇಶಕ್ಕೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ನಂ.2. ಪಿ.ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ ಬೆಂಗಳೂರು-27 ಇಲ್ಲಿ ಹಾಜರಾಗಲು ಸೂಚಿಸಿದೆ.

ಪ್ರಥಮ ಬಿ.ಫಾರ್ಮ ಕೋರ್ಸಿನಲ್ಲಿ ಉಳಿಕೆಯಾಗಿರುವ ಸೀಟುಗಳ ಹಂಚಿಕೆಯನ್ನು ಸಿ.ಇ.ಟಿ.(K.E.A) ರ್‍ಯಾಂಕಿನ ಆಧಾರದ ಮೇಲೆ ಮಾಡಲಾಗುವುದು. ಸಿ.ಇ.ಟಿ ರ್‍ಯಾಂಕ್ ಪ್ರಮಾಣ ಪತ್ರವು ಕಡ್ಡಾಯವಾಗಿರುತ್ತದೆ. ಪ್ರಥಮ ಡಿ.ಫಾರ್ಮ ಕೋರ್ಸಿನಲ್ಲಿ ಉಳಿಕೆಯಾಗಿರುವ ಸೀಟುಗಳಿಗೆ ಪರೀಕ್ಷಾ ಪ್ರಾಧಿಕಾರ ಮಂಡಳಿಯಿಂದ ಪ್ರಕಟವಾಗಿರುವ ರ್‍ಯಾಂಕ್‌ಗಳ ಆಧಾರದ ಮೇಲೆ ಸೀಟು ಹಂಚಿಕೆ ಮಾಡಲಾಗುವುದು ಹಾಗೂ ಆಯ್ಕೆಯಾದ ವಿದ್ಯಾರ್ಥಿಗಳು ಅದೇ ದಿನಾಂಕದಂದು ನಿಗದಿತ ಶುಲ್ಕವನ್ನು ಪಾವತಿಸಿ ಪ್ರವೇಶವನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-22222681, ಇ-ಮೇಲ್ principal.gcp123@gmail.com Website: www.govtcopblr.org ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## Admission to I.B Pharm and I D. Parm courses

Bengaluru, December 31(Karnataka Information):

Eligible candidates are informed that counseling for the admission to I.B Pharm and I D. Parm courses for the unfilled seats in govt. College of Pharmacy No.2 P. Kalingarao Road, Subbaiah Circle, Bangalore-27 for the year 2020-21 will be held on 04-01-2021. The remaining seats in I B. Pharm will be allotted only on the basis of CET ranking. CET rank certificate is mandatory. Remaining seats in I D. Pharm will on the basis of ranking issued by Board of Examining Authority. The students have to appear before the registration committee on 04-01-2021 between 9.00 a.m to 11.00 a.m with all original documents at the above mentioned address. The selected candidates should take admission on the same day by paying the fees. Further details contact number 080-22222681, Email: principal.gcp123@gmail.com Website: www.govtcopblr.org

**ಸಾರ್ವಜನಿಕಗ್ರಂಥಾಲಯ ಇಲಾಖೆ**

**2020ನೇ ವರ್ಷದಲ್ಲಿ ಪ್ರಥಮ ಮುದ್ರಣಗೊಂಡ ಪುಸ್ತಕ ಆಯ್ಕೆಗಾಗಿ ಆಹ್ವಾನ**

**ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):**

ಸಾರ್ವಜನಿಕ ಗ್ರಂಥಾಲಯ ಇಲಾಖೆ 2020ನೇ ವರ್ಷದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳ ಆಯ್ಕೆಗಾಗಿ ಆಹ್ವಾನಿಸಿದೆ.

ದಿನಾಂಕ: 30-01-2021ರೊಳಗೆ ಗ್ರಂಥಸ್ವಾಮ್ಯ ವಿಭಾಗ, ರಾಜ್ಯಕೇಂದ್ರಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಕಾಫಿರೈಟ್ ಮಾಡಿಸಿರತಕ್ಕದ್ದು, ಕಾಫಿರೈಟ್ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು ಹಾಗೂ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ಸಾರ್ವಜನಿಕ ಓದುಗರಿಗೆ ಒದಗಿಸಲು ಅನುಕೂಲವಾಗುವಂತೆ ಆಸಕ್ತಿಯುಳ್ಳ ಲೇಖಕರು, ಲೇಖಕ-ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳು ಪುಸ್ತಕವನ್ನು ಆಯ್ಕೆಗೆ ಸಲ್ಲಿಸುವಾಗ ತಮ್ಮ ಅನುಮತಿ ಪತ್ರದೊಂದಿಗೆ ಸದರಿ ಪುಸ್ತಕದ ಸಾಫ್ಟ್‌ಕಾಫಿಯನ್ನು ಸಿ. ಡಿ ರೂಪದಲ್ಲಿ (ನೋಂದಣಿ ಪತ್ರದ ಪ್ರತಿಯೊಂದಿಗೆ) ನಿರ್ದೇಶಕರು, ಸಾರ್ವಜನಿಕಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು-560001 ಇಲ್ಲಿಗೆ **ದಿನಾಂಕ: 02-02-2021ರಂದು ಸಂಜೆ 5.30 ಗಂಟೆಯೊಳಗೆ** ಸಲ್ಲಿಸುವುದು.

ತದನಂತರ ಬಂದ ಯಾವುದೇ ಪುಸ್ತಕಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತಅರ್ಜಿ ನಮೂನೆ ಮತ್ತು ನಿಬಂಧನೆಗಳ ಮಾಹಿತಿಗಾಗಿ ಇಲಾಖಾ ಅಂತರ್ಜಾಲ www.dpl.karnataka.gov.inಹಾಗೂ

ರಾಜ್ಯದಎಲ್ಲಾಜಿಲ್ಲಾ/ನಗರಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು/ಮುಖ್ಯಗ್ರಂಥಾಲಯಾಧಿಕಾರಿಗಳ ಕಛೇರಿಗಳಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿಈ ಕಛೇರಿಯದೂರವಾಣಿ 080-22864990, 22867358 ಸಂಪರ್ಕಿಸಲುಕೋರಿದೆ.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :31.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 86 | Satisfactory | $PM_{10}$ |
| 2 | Jayanagar 5th Block, Shalini ground | 87 | Satisfactory | $PM_{10}$ |
| 3 | KAVIKA, Mysore Road | 85 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 66 | Satisfactory | $O_3$ |
| 5 | HSR Layout, near Central Silkboard | 67 | Satisfactory | $PM_{2.5}$ |
| 6 | City Railway Station, Magestic, Bengaluru | 99 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 75 | Satisfactory | $PM_{10}$ |
| 8 | BWSSB, Kadabesanahalli | 175 | Moderate | CO |

| | | | | |
|---|---|---|---|---|
| 9 | Peenya | 64 | Satisfactory | $PM_{2.5}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

## ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 31.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 86 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 87 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 85 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 66 | ತೃಪ್ತಿಕರ | $O_3$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 67 | ತೃಪ್ತಿಕರ | $PM_{2.5}$ |

| | | | | |
|---|---|---|---|---|
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 99 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 75 | ತೃಪ್ತಿಕರ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 175 | ಸಾಧಾರಣ | CO |
| 9 | ಪೀಣ್ಯ | 64 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## ಬೆಂಗಳೂರು ಜಲಮಂಡಳಿ ಫೋನ್-ಇನ್ ಕಾರ್ಯಕ್ರಮ

**ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):**

**ಬೆಂಗಳೂರು ಜಲಮಂಡಳಿಯ ವತಿಯಿಂದ ದಿ:02-01-2021 ರ ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಮಾನ್ಯ ಅಧ್ಯಕ್ಷರು, ಬೆಂಗಳೂರು ಜಲಮಂಡಳಿ ಇವರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.**

ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಫೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: **080-22945119.** ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ.

## BWSSB Phone-in program

Bengaluru, December 31(Karnataka Information): BWSSB is conducting a Phone-in program with Hon'ble Chairman, BWSSB on 02-01-2021 i.e., on saturday from 09:00 am to 10:30 am. So we are here by requesting the public to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:**080-22945119**. It is requested to Consumers to give the R.R.Number details before raising complaint.

## ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ "ಕರ್ನಾಟಕ ಕಲಾಶ್ರೀ " ಪ್ರಶಸ್ತಿಗೆ ಪ್ರಕಟ

**ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):**

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಪ್ರತಿಷ್ಠಿತ ಕಾರ್ಯಕ್ರಮಗಳಲ್ಲಿ ಒಂದಾದ **"ಕರ್ನಾಟಕ ಕಲಾಶ್ರೀ " ಪ್ರಶಸ್ತಿಗೆ** ಸಂಗೀತ ಮತ್ತು ನೃತ್ಯ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸಿದ ಹಿರಿಯಕಲಾವಿದರನ್ನು 2020-21 ನೇ ಸಾಲಿನ **"ಕರ್ನಾಟಕ ಕಲಾಶ್ರೀ"** ಪ್ರಶಸ್ತಿ ಪ್ರಕಟಿಸಿದೆ.

ಅಕಾಡೆಮಿ ಅಧ್ಯಕ್ಷರಾದ ಆನೂರು ಅನಂತ ಕೃಷ್ಣಶರ್ಮ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸರ್ವ ಸದಸ್ಯರು ಸರ್ವಾನುಮತದಿಂದ ಪ್ರಶಸ್ತಿ ಪುರಸ್ಕೃತರನ್ನುಆಯ್ಕೆ ಮಾಡಿರುತ್ತಾರೆ.

ಪ್ರಶಸ್ತಿ ಪ್ರದಾನ ಸಮಾರಂಭವನ್ನು2021 ಫೆಬ್ರವರಿ 6 ರಂದು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಏರ್ಪಡಿಸಲು ತೀರ್ಮಾನಿಸಲಾಗಿದೆ. ಗೌರವ ಪ್ರಶಸ್ತಿ ಪುರಸ್ಕೃತರಿಗೆ ರೂ.50,000-00 ಗಳ ಗೌರವಧನ, ವಾರ್ಷಿಕ ಪ್ರಶಸ್ತಿ ಪುರಸ್ಕೃತರಿಗೆ ರೂ 25,000-00 ಗಳ ಗೌರವಧನ, ಶಾಲು, ನೆನಪಿನ ಕಾಣಿಕೆ, ಪ್ರಶಸ್ತಿ ಪತ್ರ, ಹಾರ, ಫಲ-ತಾಂಬೂಲಗಳನ್ನು**"ಕರ್ನಾಟಕ ಕಲಾಶ್ರೀ"** ಪ್ರಶಸ್ತಿಯೊಂದಿಗೆ ನೀಡಿಗೌರವಿಸಲಾಗುವುದು.

### ಗೌರವ ಪ್ರಶಸ್ತಿ

1. ಶ್ರೀ ಆರ್.ಪಿ.ಅಸುಂಡಿ, ಧಾರವಾಡ – ಹಿಂ.ಸಂಗೀತ–ಗಾಯನ
2. ಶ್ರೀಮತಿ ರಮಾಅರವಿಂದ, ಹರಿಹರಪುರ – ಸುಗಮ ಸಂಗೀತ

### ವಾರ್ಷಿಕ ಪ್ರಶಸ್ತಿ

**ಕರ್ನಾಟಕ ಸಂಗೀತ**

1. ಶ್ರೀ ಮಧೂರು ಪಿ ಬಾಲಸುಬ್ರಹ್ಮಣ್ಯಂ, ಉಡುಪಿ – ಹಾಡುಗಾರಿಕೆ
2. ಶ್ರೀಮತಿ ಸುಕನ್ಯಾರಾಂಗೋಪಾಲ್, ಬೆಂಗಳೂರು – ಘಟಂ

3. ಶ್ರೀ ಸುರೂಳ ಗಣೇಶ ಮೂರ್ತಿ, ಚಿಕ್ಕಮಗಳೂರು – ಮೃದಂಗ
4. ಶ್ರೀ ಮುರುಳಿ, ಶ್ರೀರಂಗಪಟ್ಟಣ – ನಾದಸ್ವರ

**ಹಿಂದೂಸ್ತಾನಿ ಸಂಗೀತ**

1. ಶ್ರೀ ಶ್ರೀಪಾದ ಹೆಗಡೆ, ಧಾರವಾಡ–ಗಾಯನ
2. ಪಂ.ರಾಜಪ್ರಭುದೋತ್ರೆ, ಬೆಳಗಾಂ –ಗಾಯನ
3. ಶ್ರೀ ಟಿ.ರಂಗ ಪೈ ತೋನ್ಸೆ, ಉಡುಪಿ – ತಬಲಾ

**ನೃತ್ಯ**

1. ಶ್ರೀಮತಿ ನಯನಾರೈ, ಪುತ್ತೂರು – ನೃತ್ಯಗುರು
2. ಶ್ರೀ ಪ್ರವೀಣ್‌ಕುಮಾರ್, ಬೆಂಗಳೂರು – ಭರತನಾಟ್ಯ
3. ಶ್ರೀಮತಿ ಮಧು ನಟರಾಜ್, ಬೆಂಗಳೂರು –ಕಥಕ್
4. ಶ್ರೀ ಜಿ. ಗುರುಮೂರ್ತಿ, ತುಮಕೂರು – ನೃತ್ಯ– ಮೃದಂಗ

**ಸುಗಮ ಸಂಗೀತ**

1. ಶ್ರೀ ಉಪಾಸನಾ ಮೋಹನ್, ಮಂಡ್ಯ

**ಕಥಾಕೀರ್ತನ**

1. ಶ್ರೀ ವೈಕುಂಠದತ್ತ ಮಹಾರಾಜ (ಭಾಗವತರ), ಬೀದರ್
2. ಶ್ರೀ ಜಿ.ಸೋಮಶೇಖರದಾಸ್, ತುಮಕೂರು.

**ಗಮಕ**

1. ಶ್ರೀ ಹೆಚ್.ಎಸ್.ಗೋಪಾಲ್, ಶಿವಮೊಗ್ಗ – ಗಮಕ–ವ್ಯಾಖ್ಯಾನ

**ವಿಶೇಷ ಪ್ರಶಸ್ತಿ**

1. ಶ್ರೀ ಗಣೇಶ ಭಟ್, ಮೈಸೂರು–ಕೀಬೋರ್ಡ್

## ಉಚಿತ ಸಾಹಸ ತರಬೇತಿ ಕಾರ್ಯಕ್ರಮ

ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):

ಭಾರತ ಸರ್ಕಾರದ ನೆಹರು ಯುವ ಕೇಂದ್ರ ಸಂಘಟನೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನರು ತಮ್ಮಯ ನ್ಯಾಷನಲ್ ಆಕಾಡೆಮಿ ಆಫ್ ಅಡ್ವೆಂಚರ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ದಿನಾಂಕ 02-01-2021ರಂದು ನಗರದ ನೃಪತುಂಗ ರಸ್ತೆಯಲ್ಲಿರುವ ರಾಜ್ಯ ಯುವ ಕೇಂದ್ರದ ಆವರಣದಲ್ಲಿ ಒಂದು ದಿನದ ಉಚಿತ ಸಾಹಸ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ಅಡಿಯಲ್ಲಿ ಯುವಜನರಿಗೆ ಕೃತಕ ಗೋಡೆ ಸುತ್ತುವಿಕೆ ಮತ್ತಿತರ ಸಹಾಸ ಚಟುವಟಿಕೆ ಹಮ್ಮಿಕೊಳ್ಳುವುದರ ಜೊತೆಯಲ್ಲಿ ಸಾಹಸ ಚಲನ ಚಿತ್ರ ಪ್ರದರ್ಶಿಸಲಾಗುತ್ತದೆ. ಅಲ್ಲದೆ ಸಾಹಸ ಕ್ರೀಡೆಗೆ ಸಂಬಂಧಿಸಿದ ವಸ್ತು ಪ್ರದರ್ಶನ ಹಾಗೂ ಸಲಕರಣೆಗಳ ಪ್ರದರ್ಶನ ಏರ್ಪಡಿಸಲಾಗುತ್ತದೆ. ಈ ಕಾರ್ಯಕ್ರಮವನ್ನು ಜೆತನಾ ಸಂಸ್ಥೆ ಮತ್ತು ಮೌಂಟನೆರಿಂಗ್ ಫೌಂಡೇಷನ್‌ನ ನುರಿತ ತರಬೇತಿದಾರರಿಂದ ತರಬೇತಿಯನ್ನು ನೀಡಲಾಗುತ್ತದೆ.

ಸದರಿ ಕಾರ್ಯಕ್ರಮ ಭಾರತ ಸರಕಾರದ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯ ವತಿಯಿಂದ ಹಮ್ಮಿಕೊಳ್ಳಲಾಗಿರುವ “ ರಾಷ್ಟ್ರೀಯ ಯುವಜನೋತ್ಸವ”ದ ಅಂಗವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಆಸಕ್ತ ಇರುವ ಯುವಜನರು ದಿನಾಂಕ 02-01-2021ರ ಬೆಳಿಗ್ಗೆ ಈ ಮೇಲೆ ತಿಳಿಸಿದ ಸ್ಥಳದಲ್ಲಿ ವರದಿ ಮಾಡಿಕೊಳ್ಳಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ 9902781815 ಮತ್ತು 9008840491 ಕ್ಕೆ ಸಂಪರ್ಕಿಸಲು ಪತ್ರಿಕಾ ಪ್ರಕಟಣೆ ತಿಳಿಸಿದೆ.

## ಜನವರಿ 17 ರಂದು ಪಲ್ಸ್ ಪೋಲಿಯೋ

ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು 17ನೇ ಜನವರಿ 2021ರಂದು ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

17ನೇ ಜನವರಿ 2021 ರಲ್ಲಿ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಕೋವಿಡ್ 19 ನಿವಾರಣಾ ಮುನ್ನೆಚ್ಚರಿಕೆ ಕ್ರಮಗಳೊಂದಿಗೆ boPV ನೀಡುವುದರ ಮೂಲಕ ನಡೆಸಲಾಗುವುದು. ಕಾರ್ಯಕ್ರಮದ ಮೊದಲನೇ ದಿನ ಪೋಲಿಯೊ ಬೂತ್‌ಗಳಲ್ಲಿ ಹಾಗೂ

ನಂತರದ 2–3 ದಿನಗಳಲ್ಲಿ ಮನೆ–ಮನೆ ಭೇಟಿಯ ಮೂಲಕ 0–5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ನೀಡುವಂತೆ ವ್ಯವಸ್ಥೆ ಮಾಡಲಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಆನ್‌ಲೈನ್ ಯುವಜನೋತ್ಸವ

ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):

ಭಾರತ ಸರ್ಕಾರವು ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು 2021ರ ಜನವರಿ 12 ರಿಂದ 16 ರವರೆಗೆ Virtual/hybrid ಮಾಧ್ಯಮದಲ್ಲಿ ಆಯೋಜಿಸಿದೆ.

24ನೇ ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ಹಮ್ಮಿಕೊಳ್ಳಲಾಗುತ್ತಿದ್ದು ಕರ್ನಾಟಕ ರಾಜ್ಯದ ಯುವ ತಂಡಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕರೆ ನೀಡಿದೆ.

ರಾಜ್ಯದಿಂದ ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಪಾಲ್ಗೊಳ್ಳಲು ಅನುವಾಗುವಂತೆ ರಾಜ್ಯದಲ್ಲಿ ಜಿಲ್ಲಾ ಮತ್ತು ರಾಜ್ಯ ಯುವಜನೋತ್ಸವ ಕಾರ್ಯಕ್ರಮಗಳನ್ನು ಈಗಾಗಲೇ ಆಯೋಜಿಸಲಾಗಿದೆ.

ಕೋವಿಡ್–19 ಮಾರ್ಗಸೂಚಿಗಳಂತೆ ಎರಡು ಹಂತಗಳಲ್ಲಿ ಯುವಜನೋತ್ಸವವನ್ನು Online and Offline ಮೂಲಕ ಭಾರತ ಸರ್ಕಾರವು ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಿದೆ.

ಯುವಜನೋತ್ಸವದಲ್ಲಿ ಸ್ಪರ್ಧಾತ್ಮಕ ವಿಭಾಗ, ವೈಯಕ್ತಿಕ ವಿಭಾಗ, ಏಕಾಂಕ ನಾಟಕ (ಇಂಗ್ಲೀಷ್ ಅಥವಾ ಹಿಂದಿ ಭಾಷೆಯಲ್ಲಿ ಮಾತ್ರ), ಶಾಸ್ತ್ರೀಯ ಗಾಯನ–1. ಹಿಂದೂಸ್ತಾನಿ ಮತ್ತು 2. ಕರ್ನಾಟಿಕ್, ಶಾಸ್ತ್ರೀಯ ವಾದ್ಯ– 1.ಸಿತಾರ್, 2.ಕೊಳಲು, 3.ತಬಲಾ, 4.ವೀಣೆ, 5.ಮೃದಂಗಂ. ಹಾರ್ಮೋನಿಯಂ (ಲಘು). ಗೀಟಾರ್. ಶಾಸ್ತ್ರೀಯ ನೃತ್ಯ–1.ಮಣಿಪುರ, 2.ಓಡಿಸ್ಸಿ, 3.ಭರತನಾಟ್ಯಂ, 4. ಕಥಕ್, 5. ಕುಚಿಪುಡಿ. ಆಶುಭಾಷಣ. ಸಾಂಘಿಕ ವಿಭಾಗ ಜಾನಪದ ನೃತ್ಯ, ಜಾತಪದ ಗೀತೆ. ಸ್ಪರ್ಧೇತರ ವಿಭಾಗ(ರಾಷ್ಟ್ರೀಯ ಯುಜನೋತ್ಸವದಲ್ಲಿ) ಸಾಹಸೋತ್ಸವ ಸುವಿಚಾರ–ಯುವಜನರು ಮತ್ತು ಗಣ್ಯ ವ್ಯಕ್ತಿಗಳ ಸಂವಾದ– ರಾಷ್ಟ್ರೀಯ ಸೇವಾ ಯೋಜನೆ ಸೇರಿದಂತೆ ಅನೇಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತ್ ಸ್ಟೇಜ್–4 ವಾಹನಗಳ ನೋಂದಣಿ

ಬೆಂಗಳೂರು, ಡಿಸೆಂಬರ್ 31 (ಕರ್ನಾಟಕ ವಾರ್ತೆ):

ದಿನಾಂಕ 31–03–2020ಕ್ಕಿಂತ ಮೊದಲು ಮಾರಾಟವಾಗಿ, ಇ–ವಾಹನ್ ಪೋರ್ಟಲ್‌ನಲ್ಲಿ ವಿವರಗಳನ್ನು ದಾಖಲಿಸಿ ತಾತ್ಕಾಲಿಕ ನೋಂದಣಿ ಹೊಂದಿರುವ ಮತ್ತು ಆನ್‌ಲೈನ್/ಆಫ್‌ಲೈನ್ ಮೂಲಕ ತೆರಿಗೆ ಹಾಗೂ ಶುಲ್ಕ ಪಾವತಿಸಿರುವ ಮತ್ತು ನೋಂದಣಿಗೆ ಬಾಕಿ ಇರುವ ಭಾರತ್ ಸ್ಟೇಜ್–4 ವಾಹನಗಳನ್ನು ದಿನಾಂಕ 01–01–2021ರಿಂದ 16–01–2021 ರವರೆಗೆ ಮಾತ್ರ ಕರ್ನಾಟಕ ರಾಜ್ಯದಲ್ಲಿ ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಿದೆ. ವಾಹನ ಮಾಲೀಕರು ಭಾರತ್ ಸ್ಟೇಜ್–4 ಮಾಪನದ ವಾಹನಗಳನ್ನು ಸದರಿ ಅವಧಿಯಲ್ಲಿ ಸಂಬಂಧಿಸಿದ ನೋಂದಣಿ ಪ್ರಾಧಿಕಾರದಲ್ಲಿ ಅಗತ್ಯ ದಾಖಲೆಗಳನ್ನು ಹಾಜರುಪಡಿಸಿ ನೋಂದಣಿ ಮಾಡಿಕೊಳ್ಳುವಂತೆ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.